ಟೋಲ್‌ಗಳಲ್ಲಿ ಸರಿಯಾದ ಸೌಲಭ್ಯ ಇಲ್ಲದಿರುವುದು

234(570); ಶ್ರೀ ಅಶೋಕ ಆರ್. (ಪದ್ಮನಾಭ ನಗರ)

ಅ) ರಾಜ್ಯದಲ್ಲಿ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಒಟ್ಟು ಎಷ್ಟು ಟೋಲ್‌ಗಳು ಕಾರ್ಯನಿರ್ವಹಿಸುತ್ತಿವೆ;

ಆ) ಈ ಟೋಲ್‌ಗಳಲ್ಲಿ ಅತಿಗಣ್ಯವ್ಯಕ್ತಿಗಳಿಗೆ, ಪೊಲೀಸ್ ಅಧಿಕಾರಿಗಳಿಗೆ ಮತ್ತು ಆಸ್ಪತ್ರೆ ಆಂಬ್ಯೂಲೆನ್ಸ್‌ಗಳಿಗೆ ಓಡಾಡಲು ಯಾವ ರೀತಿ ಸೌಲಭ್ಯ ಕಲ್ಪಿಸಲಾಗಿದೆ;

ಇ) ಈ ಮಾರ್ಗಗಳನ್ನು ಮುಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಈ ಸಂಸ್ಥೆಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಡಾ॥ ಹೆಚ್.ಸಿ. ಮಹದೇವಪ್ಪ (ಮಾನ್ಯ ಲೋಕೋಪಯೋಗಿ ಸಚಿವರು)

ಅ) ಕರ್ನಾಟಕ ರಾಜ್ಯದಲ್ಲಿ ರಾಷ್ಟ್ರೀಯ ಹೆದ್ದಾರಿ ವ್ಯಾಪ್ತಿಯಲ್ಲಿ ಮೂರು ಕಡೆ ಹಾಗೂ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಒಟ್ಟು 31 ಕಡೆ ಶುಲ್ಕ ಸಂಗ್ರಹ ಮಾಡಲಾಗುತ್ತಿದೆ.

ಆ) ರಾಷ್ಟ್ರೀಯ ಹೆದ್ದಾರಿ ಶುಲ್ಕ ಸಂಗ್ರಹದ ನಿಯಮಾವಳಿ 2008, 2010 ಮತ್ತು 2011 ರ ಪ್ರಕಾರ ಈ ಶುಲ್ಕ ಸಂಗ್ರಹಣಾ ಕೇಂದ್ರಗಳಲ್ಲಿ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದ ವಾಹನಗಳಿಗೆ ಅತೀ ಗಣ್ಯ ವ್ಯಕ್ತಿಗಳ, ಪೊಲೀಸ್ ಅಧಿಕಾರಿಗಳ ವಾಹನಗಳಿಗೆ ಆಸ್ಪತ್ರೆ, ಆಂಬ್ಯುಲೆನ್ಸ್‌ಗಳಿಗೆ ಶುಲ್ಕ ಪಾವತಿಯಲ್ಲಿ ವಿನಾಯಿತಿ ನೀಡಲಾಗಿದೆ ಹಾಗೂ ವಿನಾಯತಿ ಪಡೆದ ವಾಹನಗಳಿಗೆ ಪ್ರತ್ಯೇಕ ಲೇನ್‌ನಲ್ಲಿ (ಮಾರ್ಗ) ಚಲಿಸಲು ಅವಕಾಶ ಮಾಡಲಾಗಿರುತ್ತದೆ.

ಇ) ಪ್ರತ್ಯೇಕ ಮಾರ್ಗಗಳನ್ನು ನಿರ್ಮಿಸಲಾಗಿರುತ್ತದೆ.

ಈ) ಅನ್ವಯಿಸುವುದಿಲ್ಲ.